ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 7-12-19.

# ಅತ್ಯಾಚಾರಿಗೆ ಕ್ಷಮಾದಾನ ಅರ್ಜಿ ಸಲ್ಲಿಕೆಗೆ ಅವಕಾಶ ನೀಡಬಾರದು



**ಪೋಕ್ಸೊ ಅಪರಾಧಿಗಳ ಬಗ್ಗೆ ರಾಷ್ಟ್ರಪತಿ ಕೋವಿಂದ ಆಕ್ರೋಶ**

**ನವದೆಹಲಿ:** ಪೋಕ್ಸೊ ಕಾಯ್ದೆಯಡಿ ಮರಣದಂಡನೆ ಶಿಕ್ಷೆಗೆ ಗುರಿಯಾದ ಅತ್ಯಾಚಾರ ಅಪರಾಧಿಗಳಿಗೆ ಕ್ಷಮಾದಾನ ಅರ್ಜಿ ಸಲ್ಲಿಸಲು ಯಾವುದೇ ಅವಕಾಶ ನೀಡಬಾರದು ಎಂದು ರಾಷ್ಟ್ರಪತಿ ರಾಮನಾಥ್ ಕೋವಿಂದ ಅಭಿಪ್ರಾಯಪಟ್ಟಿದ್ದಾರೆ. ರಾಜಸ್ಥಾನದ ಸಿರೋಹಿಯಲ್ಲಿ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ರಾಷ್ಟ್ರಪತಿ, ಮಹಿಳೆಯರ ಭದ್ರತೆ ಗಂಭೀರವಾದ ವಿಚಾರ. ಮಹಿಳೆಯರ ಮೇಲೆ ರಾಕ್ಷಸೀಯ ರೀತಿ ದಾಳಿ ನಡೆಸಿದ ಘಟನೆಗಳು ದೇಶವನ್ನೇ ಬೆಚ್ಚಿಬೀಳಿಸಿವೆ. ಹೀಗಾಗಿ ಪೋಕ್ಸೊ ಕಾಯ್ದೆಯಡಿ ಮರಣದಂಡನೆ ಶಿಕ್ಷೆಗೆ ಗುರಿಯಾದ ಅಪರಾಧಿಗಳಿಗೆ ಕ್ಷಮಾದಾನ ಅರ್ಜಿ ಸಲ್ಲಿಸಲು ಅವಕಾಶ ನೀಡಬಾರದು. ಈ ಬಗ್ಗೆ ಸಂಸತ್ತು ಪರಿಶೀಲಿಸಬೇಕು ಎಂದಿದ್ದಾರೆ.

ಈ ಬೆನ್ನಲ್ಲೇ, 2012ರ ನಿರ್ಭಯಾ ಸಾಮೂಹಿಕ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಆರೋಪಿಗಳ ಕ್ಷಮಾದಾನ ಮನವಿಯನ್ನು ತಿರಸ್ಕರಿಸುವಂತೆ ದೆಹಲಿ ಸರ್ಕಾರ ಮಾಡಿದ್ದ ಶಿಫಾರಸನ್ನು ಗೃಹ ಸಚಿವಾಲಯ ರಾಷ್ಟ್ರಪತಿ ಕಚೇರಿಗೆ ಕಳುಹಿಸಿದೆ. ದೆಹಲಿ ಸಿಎಂ ಅರವಿಂದ ಕೇಜ್ರಿವಾಲ್, 'ಜನರು ಇಂಥ ಅಪರಾಧವೆಸಗುವುದಕ್ಕೂ ಮುಂಚೆ 10 ಸಲ ಯೋಚಿಸುವಂತಹ ಕಠಿಣ ಕಾನೂನುಗಳನ್ನು ತರಬೇಕು. ನಿರ್ಭಯಾ ಪ್ರಕರಣದಲ್ಲಿ ಇಡೀ ದೇಶ ರಸ್ತೆಗಿಳಿದಿತ್ತು. ಘಟನೆ ನಡೆದು 7 ವರ್ಷಗಳು ಕಳೆದರೂ ಅಪರಾಧಿಗಳಿಗೆ ಶಿಕ್ಷೆಯಾಗದಿರುವುದು ವಿಷಾದಕರ ವಿಷಯ' ಎಂದಿದ್ದರು. ಈಗ ರಾಷ್ಟ್ರಪತಿಗಳೂ ಈ ಬಗ್ಗೆ ವಿರೋಧ ವ್ಯಕ್ತಪಡಿಸಿದ್ದು, ಸದ್ಯ ಶಿಫಾರಸು ಅರ್ಜಿಯನ್ನು ರಾಷ್ಟ್ರಪತಿಗಳ ಅಂತಿಮ ನಿರ್ಧಾರಕ್ಕೆ ಕಳುಹಿಸಲಾಗಿದೆ. ಗೃಹ ಸಚಿವಾಲಯ ಕೂಡ ದೆಹಲಿ ಸರ್ಕಾರದ ಶಿಫಾರಸಿಗೆ ಸಹಮತ ವ್ಯಕ್ತಪಡಿಸಿದೆ ಎಂದು ಮೂಲಗಳು ತಿಳಿಸಿವೆ.